# ಕರ್ನಾಟಕ ವಿಧಾನ ಪರಿಷತ್

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅ. ದೇವೇಗೌಡ ಇವರು ನಿಯಮ 72ರ ಮೇರೆಗೆ ಮಂಡಿಸಿರುವ ಸೂಚನೆಗೆ ಉತ್ತರ:-

**ಸೂಚನೆ:-**

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಿಬ್ಬಂದಿ / ಅಧಿಕಾರಿಗಳ ಸೇವೆಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಅಭಿವೃದ್ಧಿ ಆಯುಕ್ತಾಲಯ (ಆಡಳಿತ) ಇಲಾಖೆ, ಆಯುಕ್ತಾಲಯ, ಪಂಚಾಯತ್ ರಾಜ್ ಇಲಾಖೆ, ಎಸ್.ಐ.ಆರ್.ಡಿ., ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಸಂಸ್ಥೆ, ಕರ್ನಾಟಕ ಜೈವಿಕ ಇಂಧನ ಸಂಸ್ಥೆ, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಗಮ ಈ ವಿಭಾಗಳಿಗೆ ಪ್ರತ್ಯೇಕ ವೃಂದ ಮತ್ತು ನೇಮಕಾತಿ ರಚಿಸುವ ಬದಲಿಗೆ ಎಲ್ಲವನ್ನೂ ಒಗ್ಗೂಡಿಸಿ, ಏಕೀಕರಣಗೊಳಿಸಿ, ವೃಂದ ಮತ್ತು ನೇಮಕಾತಿ ನಿಯಮ ಸಮಗ್ರವಾಗಿ ರಚಿಸುವ ಕುರಿತು ಸನ್ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುತ್ತೇನೆ.**

**ಉತ್ತರ:-**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿರುತ್ತವೆ:

1. ಕರ್ನಾಟಕ ಸಾಮಾನ್ಯ ಸೇವೆಗಳು (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2011.
2. ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತುನೇಮಕಾತಿ) ನಿಯಮಗಳು, 2020.
3. ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು, 2021.
4. ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು, 2021.

ಮೇಲೆ ನಮೂದಿಸಿರುವ ವೃಂದ ಮತ್ತು ನೇಮಕಾತಿ ನಿಯಮಗಳ ಪೈಕಿ ಕ್ರಮ ಸಂಖ್ಯೆ (1) ಮತ್ತು (2) ರಲ್ಲಿನ ವೃಂದ ಮತ್ತು ನೇಮಕಾತಿ ನಿಯಮಗಳು ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳ ಸಿಬ್ಬಂದಿಗಳಿಗೆ ಹಾಗೂ ಪಂಚಾಯತ್ ರಾಜ್ ಆಯುಕ್ತಾಲಯದ ಸಿಬ್ಬಂದಿ/ನೌಕರರಿಗೆ ಸಂಬಂಧಿಸಿರುತ್ತವೆ. ಈ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಯಾವುದೇ ತಾಂತ್ರಿಕ ಹುದ್ದೆಗಳು ಬರುವುದಿಲ್ಲ.

ಕ್ರಮ ಸಂಖ್ಯೆ (3) ಮತ್ತು (4) ರಲ್ಲಿನ ನಿಯಮಗಳು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮತ್ತು ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ಕಾಮಗಾರಿಗಳ ಅನುಷ್ಠಾನದ ದೃಷ್ಟಿಯಿಂದ ಸೃಜಿಸಲಾಗಿರುವ ವಿವಿಧ ತಾಂತ್ರಿಕ ಹಾಗೂ ಪೂರಕ ಹುದ್ದೆಗಳಿಗೆ ಸಂಬಂಧಿಸಿರುತ್ತವೆ.

ಉಳಿದಂತೆ ಅಭಿವೃದ್ಧಿ ಆಯುಕ್ತಾಲಯ (ಆಡಳಿತ),ಎಸ್.ಐ.ಆರ್.ಡಿ, ಆಯುಕ್ತಾಲಯ, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಸಂಸ್ಥೆ, ಕರ್ನಾಟಕ ಜೈವಿಕ ಇಂಧನ ಸಂಸ್ಥೆ ಹಾಗೂ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಗಮ ಇವುಗಳಿಗೆ ಮಂಜೂರಾಗಿರುವ ಹುದ್ದೆಗಳು ಶಾಶ್ವತ ಹುದ್ದೆಗಳಲ್ಲದ ಕಾರಣ ಹಾಗೂ ವಿವಿಧ ಯೋಜನೆಗಳಡಿ ಮಂಜೂರಾದ ಹುದ್ದೆಗಳಾದ ಕಾರಣ ಇವುಗಳಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನುರಚಿಸಲಾಗಿಲ್ಲ.

ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಸಂಘಗಳ (ನೊಂದಣಿ) ಕಾಯ್ದೆಯಡಿ ನೋಂದಾಯಿತ ಸಂಸ್ಥೆಯಾಗಿದ್ದು, ಇದು ಸರ್ಕಾರದ ಇಲಾಖೆಯಾಗಿರುವುದಿಲ್ಲ ಹಾಗೂ ಸದರಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ಅಭಿಯಂತರರು, ನೌಕರ/ಸಿಬ್ಬಂದಿ ನಿಯೋಜನೆ ಮೇಲೆ ಕೆಲಸ ಮಾಡುತ್ತಿರುವುದರಿಂದ ಅವರಿಗೆ ಪ್ರತ್ಯೇಕ ವೃಂದ ಮತ್ತು ನೇಮಕಾತಿ ನಿಯಮಗಳ ಅಗತ್ಯ ಇರುವುದಿಲ್ಲ. ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮ ಇದು ಕರ್ನಾಟಕ ಸರ್ಕಾರದ ಅಂಗ ಸಂಸ್ಥೆಯಾಗಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಯೋಗದಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಈ ಸಂಸ್ಥೆಯು ಪ್ರತ್ಯೇಕ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊಂದಿರುತ್ತದೆ.

ಆದ್ದರಿಂದ, ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಒಗ್ಗೂಡಿಸಿ ಒಂದೇ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿದಲ್ಲಿ ಹಲವಾರು ಆಡಳಿತಾತ್ಮಕ ಸಮಸ್ಯೆಗಳು ಎದುರಾಗುವ ಸಾಧ್ಯತೆಯಿರುತ್ತವೆ. ಅಲ್ಲದೇ ಪ್ರತ್ಯೇಕವಾದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊಂದುವುದರಿಂದ ಆಡಳಿತಾತ್ಮಕ ವಿಷಯಗಳ ನಿರ್ವಹಣೆಯು ಸುಲಲಿತವಾಗಿರುತ್ತವೆ. ಆದ್ದರಿಂದ ಎಲ್ಲಾ ವೃಂದ ಮತ್ತು ನೇಮಕಾತಿ ನಿಯಮಗಳ ಏಕೀಕರಣವು ಆಡಳಿತಾತ್ಮಕವಾಗಿ ಸಮಂಜಸವಾಗಿರುವುದಿಲ್ಲ.

ಗ್ರಾಅಪ ೩೩೧ KSS ೨೦೨೨ (ಇ)

(ಬಸವರಾಜ ಬೊಮ್ಮಾಯಿ)

ಮುಖ್ಯ ಮಂತ್ರಿ

C 108